# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂ: 615/2015 ಸಿಡಬ್ಲೂ: 3 ಪಿಡಬ್ಲೂ: 5

ಪ್ರಮಾಣವಚನ ಬೋಧಿಸಲಾಯಿತು ದಿ: 14-08-2025

ಹೆಸರು : ಸುರೇಶ್

ತಂದೆ ಹೆಸರು : ಸಾಬಣ್ಣ ಹರಿಜನ್

ವಯಸ್ಸು : 54 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾ ಸಾ 2 ನನಗೆ ಗೊತ್ತು. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತಿ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುತ್ತಾರೆ ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಗೆ ಇನೊಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ಹೆ ಸ್ಥಳದ ಪಂಚನಾಮೆಯಾಗಿದ್ದು ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುತ್ತಾರೆ ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು. ಪಂಚನಾಮೆ ಮಾಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಅದೇ ರೀತಿ ಪಂಚನಾಮೆಯ ಕಾಲಕ್ಕೆ ಏನು ವಶಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ವಾಟೀಸವಾಲು:** ಮಾನ್ಯ ಸ.ಸ.ಅ ರವರಿಂದ:

ದಿ: 24-12-2013 ರಂದು ಸಾಯಂಕಾಲ 04-15 ರಿಂದ 04-45 ರ ವರೆಗೆ ನನ್ನ ಹಾಗೂ ಚಾಸಾ 2 ರವರ ಸಮಕ್ಷಮದಲ್ಲಿ ಪೊಲೀಸ್ ಠಾಣೆಯಲ್ಲಿ ಒಟ್ಟು 390 ಜಂಡೂಬಾಂಬ್ ಡಬ್ಬಿಗಳನ್ನು ವಶಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಿಲ್ಲ. ಅದರಲ್ಲಿರುವ 4 ಡಬ್ಬಿಗಳನ್ನು

ರಾಸಾಯನಿಕ ಪರೀಕ್ಷೆ ಕುರಿತು ಪ್ರತ್ಯೇಕವಾಗಿ ಒಂದು ಬಿಳಿ ಬಟ್ಟೆಯಲ್ಲಿ ಹಾಕಿ ಸೀಲು ಮಾಡಿ SDM ಅಂತಾ ಇಂಗ್ಲಿಷ್ ಮುದ್ರೆ ಹಾಕಿರುತ್ತಾರೆ ಎಂದರೆ ಸರಿಯಿಲ್ಲ. ಸಾಕ್ಷಿಗೆ ಸದರಿ ನಾಲ್ಕು ಜಂಡೂಬಾಂಬ್ ಡಬ್ಬಿಗಳನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿಲು ನಿರಾಕರಿಸಿರುತ್ತಾರೆ ಅದರಿಂದ ಅವುಗಳನ್ನು ಈಗಾಲೇ ಕ್ರಮವಾಗಿ ಮು ಮಾ 1 ರಿಂದ 8 ಎಂದು ಗುರುತಿಸಲಾಯಿತು.

ಅದೇ ರೀತಿ ದಿ. 24-12-2013 ರಂದು ಸಾಯಂಕಾಲ 05-00 ರಿಂದ 06-00 ಗಂಟೆಯ ವರೆಗೆ ಪೊಲೀರು ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಿಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**